# ರಾಷ್ಟ್ರೀಯ ಶಿಕ್ಷಣ ನೀತಿಯ ಕಾರ್ಯಾಗಾರದ ವರದಿ

ಇಂದು ದಿನಾಂಕ 07–09–2021ರಂದು ಯಲಹಂಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕುರಿತಂತೆ ಪೋಷಕರ ಹಾಗೂ ಅಧ್ಯಾಪಕರ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಾಗಾರದ ಮೂಲಕ ಪೋಷಕರು ಮತ್ತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲಾಯಿತು.

ಈ ಕಾರ್ಯಾಗಾರವನ್ನು ಪೋಷಕರಿಂದ ಉದ್ಘಾಟಿಸಲಾಯಿತು. ಪ್ರಾಸ್ತಾವಿಕವಾಗಿ ಮಾತನಾಡಿದ ಪ್ರಿನ್ಸಿಪಾಲರಾದ ಡಾ.ಎನ್. ಗೀತಾ ಅವರು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಮಹತ್ವವನ್ನು ತಿಳಿಸಿದರು. ಪ್ರಸ್ತುತ ಶೈಕ್ಷಣಿಕ ವರ್ಷದಿಂದ 'ರಾಷ್ಟ್ರೀಯ ಶಿಕ್ಷಣ ನೀತಿ'ಯ ಅನುಸಾರವಾಗಿ ಬೋಧನೆಯನ್ನು ಆರಂಭಿಸಬೇಕಿದೆ. ಈ ನಿಟ್ಟಿನಲ್ಲಿ ಇಡೀ ಭಾರತದಲ್ಲಿಯೇ ಈ ನೀತಿಯನ್ನು ಅನುಷ್ಠಾನಗೊಳಿಸುತ್ತಿರುವ ರಾಜ್ಯಗಳಲ್ಲಿ ಕರ್ನಾಟಕವು ಮೊದಲನೆಯದಾಗಿದೆ ಎಂದು ಹೇಳಿದರು. ಈ ವರ್ಷದಿಂದ ರಾಷ್ಟ್ರೀಯ ಶಿಕ್ಷಣ ನೀತಿಯ ಅಡಿಯಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿ ಕನ್ನಡವನ್ನು ಕಡ್ಡಾಯವಾಗಿ ಕಲಿಯಬೇಕಿದೆ ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಯೋಗೀಶ್ ಅವರು ಈ ಮೊದಲಿನ ಶಿಕ್ಷಣ ಪದ್ಧತಿ ಹಾಗೂ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಬಗೆಗಿನ ವ್ಯತ್ಯಾಸಗಳನ್ನು ವಿವರಿಸಿದರು. ಈ ಮೊದಲು ಪದವಿಯು ಮೂರು ವರ್ಷದ್ದಾಗಿತ್ತು; ಆದರೆ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಪದವಿಯು ನಾಲ್ಕು ವರ್ಷದ್ದಾಗಿರುತ್ತದೆ. ವಿದ್ಯಾರ್ಥಿಗಳಿಗೆ ಹೆಚ್ಚಿನ ಆಯ್ಕೆಗಳಿವೆ ಎಂದರು. ವಿದ್ಯಾರ್ಥಿಗಳಿಗೆ ಕೆಲಸ ಸಿಕ್ಕಾಗ ಪ್ರಮಾಣಪತ್ರ ಪಡೆದುಕೊಂಡು ಹೋಗಬಹುದು ಹಾಗೂ ಪುನಃ ಓದನ್ನು ಮುಂದುವರೆಸಬಹುದು. ರಾಷ್ಟ್ರೀಯ ಶಿಕ್ಷಣ ನೀತಿಯು ಹೆಚ್ಚು ವಿದ್ಯಾರ್ಥಿ ಕೇಂದ್ರಿತವಾಗಿದೆ ಎಂದು ವಿವರಿಸಿದರು.

ಸಸ್ಯಶಾಸ್ತ್ರದ ಸಹ ಪ್ರಾಧ್ಯಾಪಕರಾದ ಡಾ.ಪಿ.ಬಿ.ಮಲ್ಲಿಕಾರ್ಜುನರವರು ರಾಷ್ಟ್ರೀಯ ಶಿಕ್ಷಣ ನೀತಿಯಿಂದ ಹೆಚ್ಚು ವಿದ್ಯಾರ್ಥಿಗಳಿಗೆ ಹೆಚ್ಚು ಅನುಕೂಲವಾಗಲಿದೆ ಎಂದರು. ಈ ರಾಷ್ಟ್ರೀಯ ಶಿಕ್ಷಣ ನೀತಿಯಿಂದಾಗಿ ಬೋಧಕರ ಹೊಣೆಗಾರಿಕೆಯು ಹೆಚ್ಚಾಗಿದೆ. ಆದ್ದರಿಂದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ನಾವೆಲ್ಲರೂ ಸೇರಿಕೊಂಡು ದಕ್ಷತೆಯಿಂದ ಅನುಷ್ಠಾನಕ್ಕೆ ತರಬೇಕಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ವಾಣಿಜ್ಯ ವಿಭಾಗದಿಂದ ಡಾ. ನಾಗರಾಜರವರು,

ಐಕ್ಯೂಎಸಿ ಸಹ ಸಂಚಾಲಕರಾದ ಡಾ. ಪ್ರಹ್ಲಾದರಾವ ಕುಲಕರ್ಣಿಯವರು ಹಾಗೂ ಇತಿಹಾಸ ವಿಭಾಗದ ಡಾ. ಶ್ರೀನಿವಾಸರೆಡ್ಡಿ ಯವರು ಈ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಎಲ್ಲಾ ವಿಭಾಗದ ಅಧ್ಯಾಪಕರು ಮತ್ತು ಬೋಧಕೇತರ ಸಿಬ್ಬಂದಿರವರನ್ನು ಒಳಗೊಂಡಂತೆ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಶೇಷಾದ್ರಿಪುರಂ ಪದವಿ ಪೂರ್ವ ಕಾಲೇಜಿನ ಪ್ರಿನ್ಸಿಪಾಲರು. ಬೋಧಕರು ಭಾಗವಹಿಸಿದ್ದರು.